# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆಸಂಖ್ಯೆ | : | 70(639) |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | : | 09/03/2026. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳನ್ನು ಒಟ್ಟು ಗೂಡಿಸಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲು ಸರ್ಕಾರವು ಅನುಮತಿ ನೀಡಿದೆಯೆ? ನೀಡಿದ್ದಲ್ಲಿ ಕಳೆದ 02 ವರ್ಷಗಳಲ್ಲಿ ಎಷ್ಟು ಶಾಲೆಗಳನ್ನು ಪರಿವರ್ತಿಸಲಾಗಿದೆ: (ಶಾಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಒಂದೇ ಆವರಣ ಅಥವಾ ಒಂದೇ ಭೌಗೋಳಿಕ ಪ್ರದೇಶದಲ್ಲಿರುವ ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಒಟ್ಟುಗೂಡಿಸಿ ಒಂದೇ ಸೂರಿನಡಿ ಪೂರ್ವ ಪ್ರಾಥಮಿಕದಿಂದ ಪದವಿ ಪೂರ್ವದವರೆಗೆ ಶಿಕ್ಷಣ ನೀಡುವ ದೃಷ್ಟಿಯಿಂದ 2023-24 ಹಾಗೂ 2024-25 ನೇ ಸಾಲಿನಲ್ಲಿ 23 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲು ಸರ್ಕಾರವು ಅನುಮತಿ ನೀಡಿದೆ.<br><br>ಕಳೆದ 02 ವರ್ಷಗಳಲ್ಲಿ ಪರಿವರ್ತಿಸಲಾದ 23 ಕೆ.ಪಿ.ಎಸ್ ಶಾಲೆಗಳ ಪಟ್ಟಿಯನ್ನು ಅನುಬಂಧ 01 ರಲ್ಲಿ ಲಗತ್ತಿಸಿದೆ. |
| ಆ | ರಾಜ್ಯದಲ್ಲಿನ ಯಾವ-ಯಾವ ಶಾಲೆಗಳನ್ನು ಯಾವ ಕಾರಣಕ್ಕಾಗಿ ಪರಿವರ್ತಿಸಲಾಗಿದೆ: (ವಿವರವಾದ ಮಾಹಿತಿ ನೀಡುವುದು) | ಸರ್ಕಾರಿ ಶಾಲೆಗಳನ್ನು ಉತ್ತಮಪಡಿಸಲು ಪೂರ್ವ ಪ್ರಾಥಮಿಕ ತರಗತಿಯಿಂದ ಪದವಿ ಪೂರ್ವ ಶಿಕ್ಷಣದವರೆಗೆ ಒಂದೇ ಸೂರಿನಡಿ ಶಿಕ್ಷಣ ನೀಡಲು ಸ್ಥಳಾವಕಾಶ ಮತ್ತು ಉತ್ತಮ ದಾಖಲಾತಿ ಹೊಂದಿರುವ ಆಯ್ದ ಸರ್ಕಾರಿ ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ. 2018 ರಿಂದ 2025 ರವರೆಗೆ 309 ಕೆ.ಪಿ.ಎಸ್. ಶಾಲೆಗಳನ್ನು ಸ್ಥಾಪಿಸಿದ್ದು, 2025-26ನೇ ಸಾಲಿನಲ್ಲಿ ಎ.ಡಿ.ಬಿ. ಸಹಯೋಗದೊಂದಿಗೆ 500 ಕೆ.ಪಿ.ಎಸ್, ಕೆ.ಕೆ.ಆರ್.ಡಿ.ಬಿ. ಯೋಜನೆಯಡಿ 200 ಸರ್ಕಾರಿ ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲು ಕ್ರಮವಹಿಸಲಾಗಿದೆ.<br><br>ಇದಲ್ಲದೇ 2025-26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹೆಚ್ಚು ದಾಖಲಾತಿ ಹೊಂದಿರುವ 100 ಉರ್ದು ಮಾಧ್ಯಮದ ಸರ್ಕಾರಿ ಶಾಲೆಗಳು ಮತ್ತು ಮೌಲಾನಾ ಆಜಾದ್ ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗಿದೆ.<br><br>04 ಗಣಿ ಬಾಧಿತ ಜಿಲ್ಲೆಗಳ 10 CEPMIZ ತಾಲ್ಲೂಕುಗಳಲ್ಲಿ 100 ಸರ್ಕಾರಿ ಶಾಲೆಗಳನ್ನು KMERC ಅನುದಾನದಡಿ ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲು ಕ್ರಮವಹಿಸಲಾಗುತ್ತಿದೆ.<br><br>2026-27ನೇ ಶೈಕ್ಷಣಿಕ ಸಾಲಿನಿಂದ ಕೆ.ಪಿ.ಎಸ್. ಶಾಲೆಗಳಲ್ಲಿ LKG ಯಿಂದ 5ನೇ ತರಗತಿಯವರೆಗೆ ಏಕ ತರಗತಿ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಮಾಧ್ಯಮದ ಬೋಧನೆಯನ್ನು ಅಳವಡಿಸಿಕೊಳ್ಳಲಾಗುತ್ತಿದೆ. 6 ಪ್ರಸ್ತುತ ಇರುವ |

| | | |
|---|---|---|
| | | ಮಾಧ್ಯಮದೊಂದಿಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಿ ಮಾಧ್ಯಮವಾರು ಏಕತರಗತಿ ಪಠ್ಯಪುಸ್ತಕ ಆಧಾರಿತ ತರಗತಿಗಳು, ಮತ್ತು ಕ್ರಿಯಾಶೀಲ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗುತ್ತಿದೆ. 1 ನೇ ತರಗತಿಯಿಂದ ಕಂಪ್ಯೂಟರ್ ಶಿಕ್ಷಣದ ಪರಿಚಯ, 6ನೇ ತರಗತಿಯಿಂದ ಉದ್ಯಮ ಸಮ್ಮಿಳಿತ ವೃತ್ತಿಪರ ಕೌಶಲ ಆಧಾರಿತ ಪಠ್ಯಕ್ರಮದ ಪರಿಚಯ ಮತ್ತು 8 ನೇ ತರಗತಿಯಿಂದ ಮಂಡಳಿ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಮರ್ಥ್ಯ ಅಭಿವೃದ್ಧಿ ತರಗತಿಗಳನ್ನು ಪ್ರಾರಂಭಿಸಲಾಗುತ್ತಿದೆ. ಭವಿಷ್ಯದ ವೃತ್ತಿಪರ ತರಬೇತಿಗಳನ್ನು 6 ನೇ ತರಗತಿಯಿಂದ ಆರಂಭಿಸಲು, ಪಠ್ಯಕ್ರಮವನ್ನು ಉದ್ಯಮ ಪಾಲುದಾರರ ಸಹಾಯದಿಂದ ವಿನ್ಯಾಸಗೊಳಿಸಿ ಜಂಟಿ ಪ್ರಮಾಣ ಪತ್ರ ನೀಡಲು ಕ್ರಮವಹಿಸಲಾಗುತ್ತಿದೆ. ಈ ಶಾಲೆಗಳು ಸಮರ್ಥ ಶಾಲಾ ಮುಖ್ಯಸ್ಥರು ಮತ್ತು ಅರ್ಹ ಶಿಕ್ಷಕರ ಸಂಪೂರ್ಣ ಸಂಪನ್ಮೂಲವನ್ನು ಹೊಂದಲು ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆಯಲ್ಲಿ ಸೂಕ್ತ ತಿದ್ದುಪಡಿಗಳನ್ನು ತಂದು ಮತ್ತು ಶಿಕ್ಷಕರ ಪ್ರೋತ್ಸಾಹಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿ ಈ ಶಾಲೆಗಳನ್ನು ಪ್ರೋತ್ಸಾಹಿಸಲಾಗುತ್ತಿದೆ. ಶಿಕ್ಷಕರ ಅಗತ್ಯಕ್ಕೆ ಅನುಗುಣವಾದ ತರಬೇತಿ, ಸಾಮರ್ಥ್ಯ ಅಭಿವೃದ್ಧಿ ಉಪಕ್ರಮಗಳ ಮೂಲಕ ತರಗತಿ ಕಲಿಕೆಯ ಅಭ್ಯಾಸಗಳನ್ನು ಬಲಪಡಿಸಲಾಗುತ್ತಿದೆ. ಇದು ಪರಿಣಾಮಕಾರಿ ಶಿಕ್ಷಣ ಶಾಸ್ತ್ರ ಮತ್ತು ವಿದ್ಯಾರ್ಥಿಗಳ ತೊಡಗಿಸಿಕೊಳ್ಳುವಿಕೆಯನ್ನು ಸುಧಾರಿಸುತ್ತದೆ.<br><br>ಪ್ರೌಢಶಾಲಾ ವಿದ್ಯಾರ್ಥಿಗಳ ಕಲಿಕೆಯನ್ನು ಸುಧಾರಿಸುವುದು ಹಾಗು 10ನೇ ಮತ್ತು 12ನೇ ತರಗತಿಯ ಮಂಡಳಿ ಪರೀಕ್ಷೆಗಳಲ್ಲಿ ಫಲಿತಾಂಶವನ್ನು ಹೆಚ್ಚಿಸುವ ಕಡೆ ಗಮನ ಹರಿಸಲಾಗಿದೆ. ಪ್ರೌಢ ತರಗತಿಗಳ ಫಲಿತಾಂಶಗಳಿಗೆ ವಿಶೇಷ ಒತ್ತು ನೀಡಲಾಗುತ್ತಿದೆ. ಇದರಲ್ಲಿ STEAM ಶಿಕ್ಷಣ, ವೃತ್ತಿಪರ ತರಬೇತಿ, ವೃತ್ತಿ ಸಲಹೆ, ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಮತ್ತು 21ನೇ ಶತಮಾನದ ಕೌಶಲಗಳಾದ ಸೃಜನಶೀಲತೆ, ವಿಮರ್ಶಾತ್ಮಕ ಚಿಂತನೆ, ಸಹಯೋಗ, ಸಂವಹನ ಮತ್ತು ಜೀವನ ಕೌಶಲಗಳ ಅಭಿವೃದ್ಧಿಯನ್ನು ಸಮ್ಮಿಳಿತಗೊಳಿಸಲಾಗುತ್ತಿದೆ. AI ಮತ್ತು ಡಿಜಿಟಲ್ ಸಂಪನ್ಮೂಲಗಳನ್ನು ಸಂಯೋಜಿಸುವ ಮೂಲಕ ಹಾಗೂ ಮೂಲಸೌಕರ್ಯವನ್ನು ಸುಧಾರಿಸುವ ಮತ್ತು ವ್ಯಾಪ್ತಿಯನ್ನು ವಿಸ್ತರಿಸುವ ಮೂಲಕ ಶಾಲೆಗಳು ಸಾರ್ವಜನಿಕ ಶಿಕ್ಷಣದ ಪ್ರಗತಿಪರ ಮರುಕಲ್ಪನೆಯನ್ನು ನೀಡುತ್ತದೆ. ಈ ಶಾಲೆಗಳು ಉಚಿತ ಸಾರಿಗೆ ಸೌಲಭ್ಯ ಮತ್ತು ತಾಂತ್ರಿಕ ಸಮ್ಮಿಳಿತದ ಕಲಿಸುವಿಕೆಯೊಂದಿಗೆ ಮಕ್ಕಳ ಶಿಕ್ಷಣ ಗುಣಮಟ್ಟವನ್ನು ಉತ್ತಮಪಡಿಸಲಾಗುವುದು.<br><br>ಮಕ್ಕಳ ಕಲಿಕೆಯನ್ನು ಉತ್ತಮಪಡಿಸಲು ಮತ್ತು ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿ ಪರೀಕ್ಷಾ ಫಲಿತಾಂಶವನ್ನು ಸುಧಾರಿಸಲು ತರಗತಿವಾರು, ವಿಷಯಾವಾರು ಪಠ್ಯ ಆಧಾರಿತ ಮೌಲ್ಯಮಾಪನ (Lesson Based Assessment-LBA) ನಡೆಸಲು |

| | | |
|---|---|---|
| | | ಎಲ್ಲಾ ತರಗತಿಗಳಿಗೆ ಸಮಗ್ರ ಪ್ರಶ್ನೆಕೋಠಿಯನ್ನು (Exhaustive Question Bank) ಸಿದ್ಧಪಡಿಸಲಾಗಿದೆ. ಫಲಿತಾಂಶ ಸುಧಾರಣೆಗೆ ವಿಷಯಾವಾರು ಶಿಕ್ಷಕರಿಗೆ ತರಬೇತಿ ಕಾರ್ಯಾಗಾರಗಳನ್ನು ನಡೆಸಿದ್ದು, ವಿಶೇಷ ತರಗತಿಗಳನ್ನು ನಡೆಸುವ ಮೂಲಕ ವಿದ್ಯಾರ್ಥಿಗಳ ಕಲಿಕೆಯನ್ನು ಉತ್ತಮಪಡಿಸಲು ಕ್ರಮವಹಿಸಲಾಗುತ್ತಿದೆ. |
| ಇ | ಈ ರೀತಿಯಾದ ಕ್ರಮಗಳಿಂದ ಕನ್ನಡ ಶಾಲೆಗಳು ಮುಚ್ಚುವ ಪ್ರಕ್ರಿಯೆ ಸರ್ಕಾರವೇ ಪ್ರಾರಂಭಿಸಿದಂತಾಗುವುದಿಲ್ಲವೇ: (ವಿವರ ನೀಡುವುದು) | ಸರ್ಕಾರಿ ಶಾಲೆಗಳಲ್ಲಿ ಪೋಷಕರಿಗೆ ಯಾವುದೇ ಆರ್ಥಿಕ ಹೊರೆಯಾಗದಂತೆ ಪೂರ್ವ ಪ್ರಾಥಮಿಕ ದಿಂದ ಪದವಿಪೂರ್ವ ಶಿಕ್ಷಣದವರೆಗೆ ಒಂದೇ ಆವರಣದಲ್ಲಿ ಸುಸಜ್ಜಿತ ಮೂಲಸೌಕರ್ಯ, ಕಲಿಕಾ ಸೌಕರ್ಯಗಳು, ದ್ವಿಭಾಷಾ ಮಾಧ್ಯಮ, ಗುಣಮಟ್ಟದ ಶಿಕ್ಷಣ, ಕಂಪ್ಯೂಟರ್ ಶಿಕ್ಷಣ, ಉದ್ಯಮ ಸಮ್ಮಿಳಿತ ವೃತ್ತಿಪರ ಕೌಶಲ ಆಧಾರಿತ ಪಠ್ಯಕ್ರಮದ ಪರಿಚಯ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಮರ್ಥ್ಯ ಅಭಿವೃದ್ಧಿ ತರಗತಿಗಳು, ಭವಿಷ್ಯದ ವೃತ್ತಿಪರ ತರಬೇತಿಗಳನ್ನು ಒದಗಿಸಲಾಗುತ್ತಿದ್ದು, ಪೋಷಕರೇ ಇಚ್ಛೆ ಪಟ್ಟು ಮಕ್ಕಳನ್ನು ಕೆ.ಪಿ.ಎಸ್. ಶಾಲೆಗಳಿಗೆ ದಾಖಲಿಸುತ್ತಿದ್ದಾರೆ. ಇದರಿಂದ ಯಾವುದೇ ಕನ್ನಡ ಮಾಧ್ಯಮದ ಶಾಲೆಗಳನ್ನು ಮುಚ್ಚುವ ಪ್ರಮೇಯ ಉದ್ಭವಿಸುವುದಿಲ್ಲ. |
| ಈ | ಇಂತಹ ಕ್ರಮಗಳಿಂದಾಗಿ ಕನ್ನಡ ಶಾಲೆಯಲ್ಲಿ ಮಕ್ಕಳ ದಾಖಲಾತಿ ಪ್ರಮಾಣ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು) | ಕನ್ನಡ ಶಾಲೆಗಳಲ್ಲಿ ಎಲ್ಲಾ ಅಗತ್ಯ ಮೂಲ ಸೌಕರ್ಯಗಳು ಮತ್ತು ವಿದ್ಯಾರ್ಥಿ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರನ್ನು ಒದಗಿಸಲಾಗಿದೆ. ಸರ್ಕಾರಿ ಶಾಲೆಗಳಲ್ಲಿ ದಾಖಲಾತಿಯನ್ನು ಉತ್ತಮ ಪಡಿಸಲು ದಿನಾಂಕ:14.11.2025 ರಂದು ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಪೋಷಕರ ಮಹಾ ಸಭೆಯನ್ನು ನಡೆಸಲಾಗಿದ್ದು, ವರ್ಷ ಪೂರ್ತಿ ಸರ್ಕಾರಿ ಶಾಲೆಗಳ ದಾಖಲಾತಿ ಉತ್ತಮಪಡಿಸಲು ಪ್ರಚಾರ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.<br>ಎಲ್ಲಾ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ವಿದ್ಯಾ ವಿಕಾಸ ಯೋಜನೆಯಡಿ ಉಚಿತ ಪಠ್ಯಪುಸ್ತಕ, ಎರಡು ಜೊತೆ ಸಮವಸ್ತ್ರ, ಶೂ-ಸಾಕ್ಸ ಮತ್ತು ಮಧ್ಯಾಹ್ನ ಬಿಸಿಯೂಟ, ಮೊಟ್ಟೆ/ಬಾಳೆಹಣ್ಣು, ಹಾಲು ವಿತರಿಸಲಾಗುತ್ತಿದೆ.<br><br>2025-26ನೇ ಸಾಲಿನವರೆಗೆ 9522 ಸರ್ಕಾರಿ ಶಾಲೆಗಳಲ್ಲಿ 1 ರಿಂದ 5ನೇ ತರಗತಿಗೆ ದ್ವಿಭಾಷಾ ಮಾಧ್ಯಮ ತರಗತಿಗಳನ್ನು ಪ್ರಾಂಭಿಸಲಾಗಿದೆ. 6456 ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ದ್ವಿಭಾಷಾ ತರಗತಿಗಳನ್ನು ಪ್ರಾರಂಭಿಸಲಾಗಿದೆ.<br><br>ಸರ್ಕಾರಿ ಶಾಲೆಗಳನ್ನು ಉತ್ತಮಪಡಿಸಲು ಪೂರ್ವ ಪ್ರಾಥಮಿಕ ತರಗತಿಯಿಂದ ಪದವಿ ಪೂರ್ವ ಶಿಕ್ಷಣದವರೆಗೆ ಒಂದೇ ಸೂರಿನಡಿ ಶಿಕ್ಷಣ ನೀಡಲು ಸ್ಥಳಾವಕಾಶ ಮತ್ತು ಉತ್ತಮ ದಾಖಲಾತಿ ಹೊಂದಿರುವ ಆಯ್ದ ಸರ್ಕಾರಿ ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ. 2018 ರಿಂದ 2025 ರವರೆಗೆ 309 ಕೆ.ಪಿ.ಎಸ್. ಶಾಲೆಗಳನ್ನು ಸ್ಥಾಪಿಸಿದ್ದು, 2025-26ನೇ ಎ.ಡಿ.ಬಿ. ಸಹಯೋಗದೊಂದಿಗೆ 500 ಕೆ.ಪಿ.ಎಸ್, ಕೆ.ಕೆ.ಆರ್.ಡಿ.ಬಿ. |

ಯೋಜನೆಯಡಿ 200 ಕೆ.ಪಿ.ಎಸ್. 04 ಗಣಿ ಬಾಧಿತ ಜಿಲ್ಲೆಗಳ 10 CEPMIZ ತಾಲ್ಲೂಕುಗಳಲ್ಲಿ KMERC ಅನುದಾನದಡಿ 100 ಕೆ.ಪಿ.ಎಸ್. ಶಾಲೆಗಳು, 585 ಪಿಎಂ ಶ್ರೀ ಶಾಲೆಗಳನ್ನು ಕೆ.ಪಿ.ಎಸ್. ಮಾದರಿಯಲ್ಲಿ ಉನ್ನತೀಕರಿಸಲು ಕ್ರಮವಹಿಸಲಾಗಿದೆ.

ಇದಲ್ಲದೇ 2025-26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹೆಚ್ಚು ದಾಖಲಾತಿ ಹೊಂದಿರುವ 100 ಉರ್ದು ಮಾಧ್ಯಮದ ಸರ್ಕಾರಿ ಶಾಲೆಗಳು ಮತ್ತು ಮೌಲಾನಾ ಆಜಾದ್ ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗಿದೆ.

2026-27ನೇ ಶೈಕ್ಷಣಿಕ ಸಾಲಿನಿಂದ ಕೆ.ಪಿ.ಎಸ್. ಶಾಲೆಗಳಲ್ಲಿ LKG ಯಿಂದ 5ನೇ ತರಗತಿಯವರೆಗೆ ಏಕ ತರಗತಿ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಮಾಧ್ಯಮದ ಬೋಧನೆಯನ್ನು ಅಳವಡಿಸಿಕೊಳ್ಳಲಾಗುತ್ತಿದೆ. 6 ಪ್ರಸ್ತುತ ಇರುವ ಮಾಧ್ಯಮದೊಂದಿಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಿ ಮಾಧ್ಯಮವಾರು ಏಕತರಗತಿ ಪಠ್ಯಪುಸ್ತಕ ಆಧಾರಿತ ತರಗತಿಗಳು, ಮತ್ತು ಕ್ರಿಯಾಶೀಲ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗುತ್ತಿದೆ. 1 ನೇ ತರಗತಿಯಿಂದ ಕಂಪ್ಯೂಟರ್ ಶಿಕ್ಷಣದ ಪರಿಚಯ, 6ನೇ ತರಗತಿಯಿಂದ ಉದ್ಯಮ ಸಮ್ಮಿಳಿತ ವೃತ್ತಿಪರ ಕೌಶಲ ಆಧಾರಿತ ಪಠ್ಯಕ್ರಮದ ಪರಿಚಯ ಮತ್ತು 8 ನೇ ತರಗತಿಯಿಂದ ಮಂಡಳಿ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಮರ್ಥ್ಯ ಅಭಿವೃದ್ಧಿ ತರಗತಿಗಳನ್ನು ಪ್ರಾರಂಭಿಸಲಾಗುತ್ತಿದೆ. ಭವಿಷ್ಯದ ವೃತ್ತಿಪರ ತರಬೇತಿಗಳನ್ನು 6 ನೇ ತರಗತಿಯಿಂದ ಆರಂಭಿಸಲು, ಪಠ್ಯಕ್ರಮವನ್ನು ಉದ್ಯಮ ಪಾಲುದಾರರ ಸಹಾಯದಿಂದ ವಿನ್ಯಾಸಗೊಳಿಸಿ ಜಂಟಿ ಪ್ರಮಾಣ ಪತ್ರ ನೀಡಲು ಕ್ರಮವಹಿಸಲಾಗುತ್ತಿದೆ. ಈ ಶಾಲೆಗಳು ಸಮರ್ಥ ಶಾಲಾ ಮುಖ್ಯಸ್ಥರು ಮತ್ತು ಅರ್ಹ ಶಿಕ್ಷಕರ ಸಂಪೂರ್ಣ ಸಂಪನ್ಮೂಲವನ್ನು ಹೊಂದಲು ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆಯಲ್ಲಿ ಸೂಕ್ತ ತಿದ್ದುಪಡಿಗಳನ್ನು ತಂದು ಮತ್ತು ಶಿಕ್ಷಕರ ಪ್ರೋತ್ಸಾಹಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿ ಈ ಶಾಲೆಗಳನ್ನು ಪ್ರೋತ್ಸಾಹಿಸಲಾಗುತ್ತಿದೆ. ಶಿಕ್ಷಕರ ಅಗತ್ಯಕ್ಕೆ ಅನುಗುಣವಾದ ತರಬೇತಿ, ಸಾಮರ್ಥ್ಯ ಅಭಿವೃದ್ಧಿ ಉಪಕ್ರಮಗಳ ಮೂಲಕ ತರಗತಿ ಕಲಿಕೆಯ ಅಭ್ಯಾಸಗಳನ್ನು ಬಲಪಡಿಸಲಾಗುತ್ತಿದೆ. ಇದು ಪರಿಣಾಮಕಾರಿ ಶಿಕ್ಷಣ ಶಾಸ್ತ್ರ ಮತ್ತು ವಿದ್ಯಾರ್ಥಿಗಳ ತೊಡಗಿಸಿಕೊಳ್ಳುವಿಕೆಯನ್ನು ಸುಧಾರಿಸುತ್ತದೆ.

ಪ್ರೌಢಶಾಲಾ ವಿದ್ಯಾರ್ಥಿಗಳ ಕಲಿಕೆಯನ್ನು ಸುಧಾರಿಸುವುದು ಹಾಗು 10ನೇ ಮತ್ತು 12ನೇ ತರಗತಿಯ ಮಂಡಳಿ ಪರೀಕ್ಷೆಗಳಲ್ಲಿ ಫಲಿತಾಂಶವನ್ನು ಹೆಚ್ಚಿಸುವ ಕಡೆ ಗಮನ ಹರಿಸಲಾಗಿದೆ. ಪ್ರೌಢ ತರಗತಿಗಳ ಫಲಿತಾಂಶಗಳಿಗೆ ವಿಶೇಷ ಒತ್ತು ನೀಡಲಾಗುತ್ತಿದೆ. ಇದರಲ್ಲಿ STEAM ಶಿಕ್ಷಣ, ವೃತ್ತಿಪರ ತರಬೇತಿ, ವೃತ್ತಿ ಸಲಹೆ, ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಮತ್ತು 21ನೇ ಶತಮಾನದ

| | | |
|---|---|---|
| | | ಕೌಶಲಗಳಾದ ಸೃಜನಶೀಲತೆ, ವಿಮರ್ಶಾತ್ಮಕ ಚಿಂತನೆ, ಸಹಯೋಗ, ಸಂವಹನ ಮತ್ತು ಜೀವನ ಕೌಶಲಗಳ ಅಭಿವೃದ್ಧಿಯನ್ನು ಸಮ್ಮಿಳಿತಗೊಳಿಸಲಾಗುತ್ತಿದೆ. AI ಮತ್ತು ಡಿಜಿಟಲ್ ಸಂಪನ್ಮೂಲಗಳನ್ನು ಸಂಯೋಜಿಸುವ ಮೂಲಕ ಹಾಗೂ ಮೂಲಸೌಕರ್ಯವನ್ನು ಸುಧಾರಿಸುವ ಮತ್ತು ವ್ಯಾಪ್ತಿಯನ್ನು ವಿಸ್ತರಿಸುವ ಮೂಲಕ ಶಾಲೆಗಳು ಸಾರ್ವಜನಿಕ ಶಿಕ್ಷಣದ ಪ್ರಗತಿಪರ ಮರುಕಲ್ಪನೆಯನ್ನು ನೀಡುತ್ತದೆ. ಈ ಶಾಲೆಗಳು ಉಚಿತ ಸಾರಿಗೆ ಸೌಲಭ್ಯ ಮತ್ತು ತಾಂತ್ರಿಕ ಸಮ್ಮಿಳಿತದ ಕಲಿಸುವಿಕೆಯೊಂದಿಗೆ ಮಕ್ಕಳ ಶಿಕ್ಷಣ ಗುಣಮಟ್ಟವನ್ನು ಉತ್ತಮಪಡಿಸಲಾಗುವುದು.<br><br>ಮಕ್ಕಳ ಕಲಿಕೆಯನ್ನು ಉತ್ತಮಪಡಿಸಲು ಮತ್ತು ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿ ಪರೀಕ್ಷಾ ಫಲಿತಾಂಶವನ್ನು ಸುಧಾರಿಸಲು ತರಗತಿವಾರು, ವಿಷಯಾವಾರು ಪಠ್ಯ ಆಧಾರಿತ ಮೌಲ್ಯಮಾಪನ (Lesson Based Assessment-LBA) ನಡೆಸಲು ಎಲ್ಲಾ ತರಗತಿಗಳಿಗೆ ಸಮಗ್ರ ಪ್ರಶ್ನೆಕೋಠಿಯನ್ನು (Exhaustive Question Bank) ಸಿದ್ಧಪಡಿಸಲಾಗಿದೆ. ಫಲಿತಾಂಶ ಸುಧಾರಣೆಗೆ ವಿಷಯಾವಾರು ಶಿಕ್ಷಕರಿಗೆ ತರಬೇತಿ ಕಾರ್ಯಾಗಾರಗಳನ್ನು ನಡೆಸಿದ್ದು, ವಿಶೇಷ ತರಗತಿಗಳನ್ನು ನಡೆಸುವ ಮೂಲಕ ವಿದ್ಯಾರ್ಥಿಗಳ ಕಲಿಕೆಯನ್ನು ಉತ್ತಮಪಡಿಸಲು ಕ್ರಮವಹಿಸಲಾಗುತ್ತಿದೆ.<br><br>2026-27ನೇ ಸಾಲಿನಿಂದ ರಾಜ್ಯ ಎಲ್ಲಾ ಕೆ.ಪಿ.ಎಸ್. ಶಾಲೆಗಳು, ಪಿಎಂ.ಶ್ರೀ ಶಾಲೆಗಳು, ಆದರ್ಶ ವಿದ್ಯಾಲಯಗಳು, ದ್ವಿ ಭಾಷಾ ತರಗತಿಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳು, ಪೂರ್ವ ಪ್ರಾಥಮಿಕ ತರಗತಿಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳು, ಆಯ್ದ 15 ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು 10 CEPMIZ ತಾಲ್ಲೂಕುಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ 1 ರಿಂದ 5 ನೇ ತರಗತಿಗಳನ್ನು ದ್ವಿ ಭಾಷಾ ಏಕತರಗತಿ ಬೋಧನಾ ವ್ಯವಸ್ಥೆಯನ್ನು ಪ್ರಾರಂಭಿಸಲಾಗುತ್ತಿದೆ. |
| ಉ | ಕಳೆದ 03 ವರ್ಷಗಳಲ್ಲಿ ಕನ್ನಡ ಶಾಲೆಯಲ್ಲಿ ಮಕ್ಕಳ ದಾಖಲಾತಿ ಪ್ರಮಾಣವು ಶೇಕಡವಾರು ಎಷ್ಟು ಕಡಿಮೆಯಾಗಿದೆ; ಕಡಿಮೆಯಾಗಲು ಕಾರಣವೇನು; ಹಾಗೂ ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು? | ಕನ್ನಡ ಶಾಲೆಯಲ್ಲಿ ಮಕ್ಕಳ ದಾಖಲಾತಿ ಪ್ರಮಾಣವೂ ಶೇ.11.20 ರಷ್ಟು ಕಡಿಮೆಯಾಗಿದೆ. ಆದರೆ ಈ ಪ್ರಮಾಣವು ಕೆ.ಪಿ.ಎಸ್ ಶಾಲೆ ಪ್ರಾರಂಭ ಮಾಡಿರುವ ಕಾರಣದಿಂದಾಗಿರುವುದಿಲ್ಲ.<br><br>ಪಾಲಕರ ಇಂಗ್ಲೀಷ್ ಮಾಧ್ಯಮದ ವ್ಯಾಮೋಹ, ಕೇಂದ್ರ ಪಠ್ಯ ಕ್ರಮದ ವ್ಯಾಮೋಹ ಮತ್ತು ಹೆಚ್ಚುತ್ತಿರುವ ಖಾಸಗಿ ಶಾಲೆಗಳಿಂದ ಕನ್ನಡ ಶಾಲೆಯಲ್ಲಿ ಮಕ್ಕಳ ದಾಖಲಾತಿ ಕಡಿಮೆಯಾಗುತ್ತಿದೆ.<br><br>ಮಕ್ಕಳ ದಾಖಲಾತಿ ಪ್ರಮಾಣವನ್ನು ಹೆಚ್ಚಿಸಲು ಸರ್ಕಾರವು ಕೆಳಕಂಡ ಕ್ರಮಗಳನ್ನು ಪಾಲಿಸುತ್ತಿವೆ:<br><br>2025-26ನೇ ಸಾಲಿನವರೆಗೆ 9522 ಸರ್ಕಾರಿ ಶಾಲೆಗಳಲ್ಲಿ 1 ರಿಂದ 5 ನೇ ತರಗತಿಗೆ ದ್ವಿಭಾಷಾ ಮಾಧ್ಯಮ ತರಗತಿಗಳನ್ನು ಪ್ರಾಂಭಿಸಲಾಗಿದೆ. 6456 ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ |

| | | |
|---|---|---|
| | | ದ್ವಿಭಾಷಾ ತರಗತಿಗಳನ್ನು ಪ್ರಾರಂಭಿಸಲಾಗಿದೆ.<br><br>ಸರ್ಕಾರಿ ಶಾಲೆಗಳನ್ನು ಉತ್ತಮಪಡಿಸಲು ಪೂರ್ವ ಪ್ರಾಥಮಿಕ ತರಗತಿಯಿಂದ ಪದವಿ ಪೂರ್ವ ಶಿಕ್ಷಣದವರೆಗೆ ಒಂದೇ ಸೂರಿನಡಿ ಶಿಕ್ಷಣ ನೀಡಲು ಸ್ಥಳಾವಕಾಶ ಮತ್ತು ಉತ್ತಮ ದಾಖಲಾತಿ ಹೊಂದಿರುವ ಆಯ್ದ ಸರ್ಕಾರಿ ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ. |

ಸಂಖ್ಯೆ:ಇಪಿ 81 ಯೋಸಕ 2026

(ಎಸ್.ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

LCQ- 639

2023-24 and 2024-25 ಅನುಬಂಧ-1

# 2023-24 Started KPS schools LIST

| SL.NO | DISTRICTS | SL.NO | HIGH SCHOOL DISE CODE | NAME OF ASPIRATION TQ | KPS NAME | TYPE OF SCHOOLS |
|---|---|---|---|---|---|---|
| 1 | Ballary | 1 | 29120104505 | Kurugodu | KPS Kallukamba | PRIMARY |
| | | | 29120104505 | | | HS |
| 2 | Belagavi | 2 | 29010212308 | Bylahongala | KPS Vakkunda | PRIMARY |
| | | | 29010212308 | | | HS |
| | | | 29010212308 | | | PUC |
| 3 | Bidar | 3 | 29050100132 | Aurad | KPS Aurad | PRIMARY |
| | | | 29050100132 | | | HS |
| | | | 29050100132 | | | PUC |
| 3 | Bidar | 4 | 29050502310 | Humnabad | KPS Dubalagundi | PRIMARY |
| | | | 29050502310 | | | HS |
| | | | 29050502310 | | | PUC |
| 4 | Dharwad | 5 | 29090501602 | Navalagunda | KPS Chilakavada | PRIMARY |
| | | | 29090501602 | | | HS |
| | | | 29090501602 | | | PUC |
| 5 | Gadag | 6 | 29080413203 | Gajendragada | KPS Gajendragada | PRIMARY |
| | | | 29080413203 | | | HS |
| | | | 29080413203 | | | HS |
| | | | 29080413203 | | | PUC |
| 5 | Gadag | 7 | 29080501302 | Lakshmishwara | KPS Putgowbandi | PRIMARY |
| | | | 29080501302 | | | HS |
| 6 | Kalburgi | 8 | 29041103418 | Kamalapura | KPS Kamalapura | PRIMARY |
| | | | 29041103418 | | | PRIMARY |
| | | | 29041103418 | | | HS |
| | | | 29041103418 | | | HS |
| | | | 29041103418 | | | PUC |
| 6 | Kalburgi | 9 | 29040600802 | Jewargi | KPS Ankalagi | PRIMARY |
| | | | 29040600802 | | | PRIMARY |
| | | | 29040600802 | | | HS |
| 6 | Kalburgi | 10 | 29040409709 | Shahapura | KPS Ravuru | PRIMARY |
| | | | 29040409709 | | | PRIMARY |
| | | | 29040409709 | | | PRIMARY |
| | | | 29040409709 | | | HS |
| 6 | Kalburgi | 11 | 29040407101 | Chittapura | KPS Ladlapura | PRIMARY |
| | | | 29040407101 | | | HS |
| 7 | Koppala | 12 | 29070209203 | Gangavathi | KPS Kesaratti | PUC |
| | | | 29070209203 | | | HS |
| | | | 29070209203 | | | PRIMARY |
| 8 | Mysore | 13 | 29260309106 | HD Kote | Antarasante | PRIMARY |
| | | | 29260309106 | | | HS |
| | | | 29260309106 | | | PUC |
| 9 | Raichur | 14 | 29060609420 | Sirivara | KPS Kavithal | PRIMARY |
| | | | 29060609420 | | | HS |
| | | | 29060609420 | | | PUC |
| 10 | Vijayanagara | 15 | 29120303804 | Hagaribommanahalli | KPS Morigeri | PRIMARY |
| | | | 29120303804 | | | HS |
| | | | 29120303804 | | | PUC |
| 11 | Vijayapura | 16 | 29030324907 | Basavanabagewadi | KPS Basavanabagewadi | PRIMARY |
| | | | 29030324907 | | | PRIMARY |
| | | | 29030324907 | | | HS |
| | | | 29030324907 | | | PUC |
| 11 | Vijayapura | 17 | 29030501016 | Tikota | KPS Babanagara | PRIMARY |
| | | | 29030501016 | | | PRIMARY |
| | | | 29030501016 | | | HS |
| 11 | Vijayapura | 18 | 29031017916 | Talikote | KPS Talikote | PRIMARY |
| | | | 29031017916 | | | PRIMARY |
| | | | 29031017916 | | | HS |

| | | | | | | |
|---|---|---|---|---|---|---|
| | | | 29031017916 | | | PUC |
| 11 | Vijayapura | 19 | 29030309723 | Nidagundi | KPS Kamadal | PRIMARY |
| | | | 29030309723 | | | HS |
| 12 | Yadgiri | 20 | 29330714211 | Vadagera | KPS Vadagera | HS |
| | | | 29330714211 | | | PRIMARY |
| 12 | Yadgiri | 21 | 29330816708 | Hunasagi | KPS Narayanapura | PRIMARY |
| | | | 29330816708 | | | HS |
| | | | 29330816708 | | | PUC |
| 12 | Yadgiri | 22 | 29331026208 | Yadagiri | KPS Yadagiri | PRIMARY |
| | | | 29331026208 | | | PRIMARY |
| | | | 29331026208 | | | HS |
| | | | 29331026208 | | | PUC |
| | | | 29331026208 | | | PUC |
| 13 | SHIVMOGGA | 23 | 29150527603 | SHIVMOGGA | KPS PILLANGERI (NEW) | HS |

ನಿರ್ದೇಶಕರು (ಗುಣಮಟ್ಟ)

ಸಮಗ್ರ ಶಿಕ್ಷಣ ಕರ್ನಾಟಕ